ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಸಂ: ಕಾಶಿಇ:11:ವರ್ಗಾವಣೆ:2021-22:ವ&ನಿ

ಕಾಲೇಜು & ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ:21.07.2021.

## ಅಧಿಸೂಚನೆ

ವಿಷಯ: 2021ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ಪ್ರಕ್ರಿಯೆ ಸಂಬಂಧ ತಾತ್ಕಾಲಿಕ ಆದ್ಯತಾ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.01.2021 ರಂತೆ ಅಧಿಸೂಚಿಸಲಾದ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳು-2021.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.06.2021.
3. ಈ ಕಛೇರಿ ಸಮ ಸಂಖ್ಯೆಯ ದಿನಾಂಕ:01-07-2021, 08.07.2021 ಮತ್ತು 16-07-2021ರ ಅಧಿಸೂಚನೆ.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ರೂಪಿಸಿ ಅಧಿಸೂಚಿಸಲಾಗಿರುತ್ತದೆ.

ಸದರಿ ವರ್ಗಾವಣೆ ನಿಯಮಗಳ ನಿಯಮಗಳನ್ವಯ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವಲಯವಾರು ಪಟ್ಟಿಯನ್ನು ಉಲ್ಲೇಖ (3) ರಂತೆ ಪ್ರಕಟಿಸಿ ಆಕ್ಷೇಪಣೆಗಳನ್ನು ಹಾಗೂ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ನಿಗದಿತ ಕೊನೆಯ ದಿನಾಂಕದೊಳಗೆ ಆನ್‌ಲೈನ್ ಮೂಲಕ ಸ್ವೀಕೃತವಾದ ಆಕ್ಷೇಪಣೆಗಳು ಹಾಗೂ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ತಾತ್ಕಾಲಿಕ ಆಧ್ಯತಾ ಪಟ್ಟಿ ಹಾಗೂ ವಿಶೇಷ ಪ್ರಕರಣಗಳಡಿ ಕೋರಿಕೆ ವರ್ಗಾವಣೆಗೆ ಅರ್ಹರಿರುವ ಬೋಧಕರ ತಾತ್ಕಾಲಿಕ ಆಧ್ಯತಾ ಪಟ್ಟಿಯನ್ನು ಈ ಅಧಿಸೂಚನೆಗೆ ಲಗತ್ತಿಸಲಾಗಿದೆ.

ಈ ಅಧಿಸೂಚನೆಗೆ ಲಗತ್ತಿಸಿರುವ ವರ್ಗಾವಣೆಯ ತಾತ್ಕಾಲಿಕ ಆಧ್ಯತಾ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:23.07.2021 ರ ಒಳಗಾಗಿ **dce.transfers2021@gmail.com** ವಿಳಾಸಕ್ಕೆ ಇಮೇಲ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ವಿಶೇಷ ಪ್ರಕರಣಗಳ ಮತ್ತು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಕೌನ್ಸಿಲಿಂಗ್‌ನ ವೇಳಾಪಟ್ಟಿಯನ್ನು ಅಂತಿಮ ವರ್ಗಾವಣೆ ಆಧ್ಯತಾ ಪಟ್ಟಿ ಪ್ರಕಟಣಾ ಸಂದರ್ಭದಲ್ಲಿ ಪ್ರಕಟಿಸಲಾಗುವುದು.

**ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಯ ಆದ್ಯತಾಪಟ್ಟಿಯ ಅರ್ಹ ಬೋಧಕರು ಕೌನ್ಸಿಲಿಂಗ್‌ಗೆ ಗೈರುಹಾಜರಾದಲ್ಲಿ ಅಥವಾ ಸ್ಥಳ ಆಯ್ಕೆಯನ್ನು ನಿರಾಕರಿಸಿದಲ್ಲಿ ಅವರ ಬದಲಾಗಿ ಕಾಯ್ದಿರಿಸಿದ ಪಟ್ಟಿಯಲ್ಲಿನ ಬೋಧಕರಿಗೆ ಕೌನ್ಸಿಲಿಂಗ್‌ಗೆ ಅವಕಾಶ ನೀಡಲಾಗುವುದು.**

ಲಗತ್ತುಗಳು:
1. **ಅನುಬಂಧ 1 A-** ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ವಿಶೇಷ ಪ್ರಕರಣಗಳ ವರ್ಗಾವಣೆಗೆ ಮತ್ತು ಸಾರ್ವಜನಿಕ ಹಿತಾಸಕ್ತಿ ವರ್ಗಾವಣೆಗೆ ಒಳಪಡುವ ಬೋಧಕರ ಆದ್ಯತಾ ಪಟ್ಟಿ
2. **ಅನುಬಂಧ 1 B** - ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ವಿಶೇಷ ಪ್ರಕರಣಗಳ ವರ್ಗಾವಣೆಯ ಕಾಯ್ದಿರಿಸಿದ ಬೋಧಕರ ಆದ್ಯತಾ ಪಟ್ಟಿ
3. **ಅನುಬಂಧ 2 A** - ಉಳಿಕೆ ಮೂಲವೃಂದದ ವಿಶೇಷ ಪ್ರಕರಣಗಳ ವರ್ಗಾವಣೆಗೆ ಮತ್ತು ಸಾರ್ವಜನಿಕ ಹಿತಾಸಕ್ತಿ ವರ್ಗಾವಣೆಗೆ ಒಳಪಡುವ ಬೋಧಕರ ಆದ್ಯತಾ ಪಟ್ಟಿ
4. **ಅನುಬಂಧ 2 B** - ಉಳಿಕೆ ಮೂಲವೃಂದದ ವಿಶೇಷ ಪ್ರಕರಣಗಳ ವರ್ಗಾವಣೆಯ ಕಾಯ್ದಿರಿಸಿದ ಬೋಧಕರ ಆದ್ಯತಾ ಪಟ್ಟಿ

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

**ಇವರಿಗೆ**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

**ಪ್ರತಿಯನ್ನು**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
2. ರಕ್ಷಾ ಕಡತ
3. ಕಛೇರಿ ಪ್ರತಿ.